27-5-2023
UDAYAVANI - MANIPAL

# ಸರಕಾರಿ ಸಮುದಾಯ ಆರೋಗ್ಯ ಅಧಿಕಾರಿಗಳಿಗೆ ಕಾರ್ಯಾಗಾರ



**ಮಣಿಪಾಲ, ಮೇ 26:** ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಉಡುಪಿ ಹಾಗೂ ಜಿಲ್ಲಾ ಅಂಧತ್ವ ನಿಯಂತ್ರಣ ಘಟಕ ಉಡುಪಿ ಜಿಲ್ಲೆಯ ಸಂಯುಕ್ತ ಆಶ್ರಯದಲ್ಲಿ ಆರೋಗ್ಯ ಮತ್ತು ಕ್ಷೇಮ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರಕಾರಿ ಸಮುದಾಯ ಆರೋಗ್ಯ ಅಧಿಕಾರಿಗಳಿಗೆ ಒಂದು ದಿನದ ಕಾರ್ಯಾಗಾರ ಇಂಟರ್ಯಾಕ್ಟ್ ಸಭಾಂಗಣದಲ್ಲಿ ನಡೆಯಿತು.

ಕಾರ್ಯಾಗಾರದಲ್ಲಿ ನೇತ್ರ ಮತ್ತು ಸಂಬಂಧಿತ ಕಾಯಿಲೆಗಳ ಶಿಕ್ಷಣ ಹಾಗೂ ಅಂಧತ್ವ ನಿಯಂತ್ರಣ ಕಾರ್ಯಕ್ರಮದ ಕುರಿತು ಶಿಕ್ಷಣ ನೀಡಲಾಯಿತು.

ಜಿಲ್ಲಾ ಆರೋಗ್ಯಾಧಿಕಾರಿ ಡಾ। ನಾಗಭೂಷಣ ಉಡುಪ ಉದ್ಘಾಟಿಸಿ, ರಾಜ್ಯದಲ್ಲಿಯೇ ಮೊದಲ ಬಾರಿಗೆ ನೇತ್ರಪ್ರಧಾನ ಕಾರ್ಯಕ್ರಮದ ಅಂಗವಾಗಿ ಈ ಕಾರ್ಯಕ್ರಮವನ್ನು ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ಸಹಯೋಗದೊಂದಿಗೆ ನಡೆಸುತ್ತಿದ್ದೇವೆ. ಇದು ರಾಜ್ಯಕ್ಕೆ ಮಾದರಿಯಾಗಬೇಕು. ಇದರ ಮೂಲಕ ಎಲ್ಲರೂ ಅಂಧತ್ವದಿಂದ ಮುಕ್ತರಾಗಬೇಕು ಎಂದರು.

ಕೆಎಂಸಿ ಡೀನ್ ಡಾ। ಪದ್ಮರಾಜ್ ಹೆಗ್ಡೆ ಅಧ್ಯಕ್ಷತೆವಹಿಸಿ, ಈಗ ನಾವು ಕಂಪ್ಯೂಟರ್ ಮತ್ತು ತಂತ್ರಜ್ಞಾನ ಕಾಲದಲ್ಲಿದ್ದೇವೆ. ಸಣ್ಣ ಮಕ್ಕಳಿಂದ ಎಲ್ಲರೂ ಮೊಬೈಲ್ ಮತ್ತು ದೂರದರ್ಶನದಿಂದ ಕಣ್ಣಿನ ಸಮಸ್ಯೆಗೆ ಒಳಪಡುತ್ತಿದ್ದಾರೆ. ಸೂಕ್ತ ಸಮಯದಲ್ಲಿ ವೈದ್ಯರಿಗೆ ತೋರಿಸಿ ಚಿಕಿತ್ಸೆ ಪಡೆಯುವುದರಿಂದ ಸಮಸ್ಯೆಗೆ ಪರಿಹಾರ ಪಡೆದುಕೊಳ್ಳಬಹುದು ಎಂದರು.

ಜಿಲ್ಲಾ ಅಂಧತ್ವ ನಿಯಂತ್ರಣ ಅಧಿಕಾರಿ ಡಾ। ಲತಾ ನಾಯಕ್, ವೈದ್ಯಕೀಯ ಅಧೀಕ್ಷಕ ಡಾ। ಅವಿನಾಶ್ ಶೆಟ್ಟಿ ಉಪಸ್ಥಿತರಿದ್ದರು. ಸಂಪನ್ಮೂಲ ವ್ಯಕ್ತಿಗಳಾಗಿ ಮಣಿಪಾಲ ಕಸ್ತೂರ್ಬಾ ಆಸ್ಪತ್ರೆಯ ಸಹ ಪ್ರಾಧ್ಯಾಪಕಿ ಡಾ। ನೀತಾ, ಸಹಾಯಕ ಪ್ರಾಧ್ಯಾಪಕಿ ಡಾ। ಸುಶನಾ ಶೆಟ್ಟಿ, ಸಹ ಪ್ರಾಧ್ಯಾಪಕಿ ಡಾ। ರಶ್ಮಿ ಕೆ. ಭಾಗವಹಿಸಿದ್ದರು.

ಜಿಲ್ಲೆಯ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸುಮಾರು 250 ಸಮುದಾಯ ಆರೋಗ್ಯ ಅಧಿಕಾರಿಗಳು ಪಾಲ್ಗೊಂಡು ಇದರ ಪ್ರಯೋಜನ ಪಡೆದುಕೊಂಡರು. ಸಮುದಾಯ ಆರೋಗ್ಯ ವಿಭಾಗದ ಮುಖ್ಯಸ್ಥ ಡಾ। ಅಶ್ವಿನಿ ಕುಮಾರ್ ಗೋಪಾಡಿ ಸ್ವಾಗತಿಸಿ, ನೇತ್ರಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ। ಯೋಗೀಶ್ ಕಾಮತ್ ವಂದಿಸಿದರು. ಡಾ। ಶ್ರುತಿ ನಿರೂಪಿಸಿದರು.

THE TIMES OF INDIA, MANGALURU
SATURDAY, MAY 27, 2023

# Workshop for govt community health officials held at Manipal

Times News Network

**Manipal:** Kasturba Medical College and Hospital Manipal, in association with the district health and family welfare department, Udupi, and District Blindness Control Society Udupi District, organised a one-day workshop for government community health officers working in health and wellness centres on Friday. The workshop imparted education on eye and related diseases, and the blindness control programme.

District health and family welfare officer Dr Nagabhushan Udupa hoped that the programme will become a model one for the entire state, through which every child born will be free from blindness.



Dr Padmaraj Hegde, dean KMC, said that in this age of computers and technology, everyone is affected with eye problems due to mobile phones and television. By showing it to the doctor at the right time and getting treatment, the problem can be solved completely, he said.

Dr Latha Nayak, district blindness officer, said that through this training programme, all diseases related to the eyes will be detected in villages, and that it will help patients to get treatment at the right time.

Dr Neetha, associate professor, Dr Sushan Shetty, assistant professor and Dr Rashmi K, assistant, department of ophthalmology, Kasturba Hospital, participated as resource persons. About 250 community health officers working in the health and wellness centres of Udupi participated.

ಪ್ರಜಾವಾಣಿ
ಶನಿವಾರ • ಮೇ 27, 2023

## ನೇತ್ರ ಸಂಬಂಧಿ ಕಾಯಿಲೆಗಳ ಕುರಿತು ಕಾರ್ಯಾಗಾರ

# ಅಂಧತ್ವ ಮುಕ್ತ ಸಮಾಜದ ಗುರಿ

ಪ್ರಜಾವಾಣಿ ವಾರ್ತೆ

ಉಡುಪಿ: ಮಣಿಪಾಲದ ಕಸ್ತೂರಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ವತಿಯಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಅಂಧತ್ವ ನಿಯಂತ್ರಣ ಘಟಕದ ಆಶ್ರಯದಲ್ಲಿ ಆರೋಗ್ಯ ಮತ್ತು ಕ್ಷೇಮ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ಸಮುದಾಯ ಆರೋಗ್ಯ ಅಧಿಕಾರಿಗಳಿಗೆ ಮಾಹೆ ಮಣಿಪಾಲದ ಇಂಟರ್ರಾಕ್ಟ್ ಸಭಾಂಗಣದಲ್ಲಿ ಶುಕ್ರವಾರ ಕಾರ್ಯಾಗಾರ ನಡೆಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ನಾಗಭೂಷಣ ಉಡುಪ ರಾಜ್ಯದಲ್ಲಿ ಮೊದಲ ಬಾರಿಗೆ ಕಸ್ತೂರಬಾ ಆಸ್ಪತ್ರೆ ಮಣಿಪಾಲದ ಸಹಯೋಗದೊಂದಿಗೆ ನೇತ್ರ ಪ್ರದಾನ ಕಾರ್ಯಕ್ರಮ ಆಯೋಜಿಸಲಾಗಿದ್ದು, ಈ ಕಾರ್ಯಕ್ರಮ ರಾಜ್ಯಕ್ಕೆ ಮಾದರಿಯಾಗಬೇಕು. ಈ ಮೂಲಕ ಸಮಾಜದಲ್ಲಿ ಹುಟ್ಟಿದ ಮಗುವಿನಿಂದ ಹಿಡಿದು ಎಲ್ಲರೂ ಅಂಧತ್ವದಿಂದ ಮುಕ್ತರಾಗಬೇಕು ಎಂದು ಆಶಿಸಿದರು.

ಅಧ್ಯಕ್ಷತೆ ವಹಿಸಿದ್ದ ಕೆಎಂಸಿ ಡೀನ್ ಡಾ.ಪದ್ಮರಾಜ್ ಹೆಗ್ಡೆ ಮಾತನಾಡಿ, ಪ್ರಸ್ತುತ ಕಂಪ್ಯೂಟರ್ ಮತ್ತು ತಂತ್ರಜ್ಞಾನ ಕಾಲದಲ್ಲಿದ್ದು, ಸಣ್ಣ ಮಕ್ಕಳಿಂದ ಹಿರಿಯರವರೆಗೂ ಎಲ್ಲರೂ ಮೊಬೈಲ್ ಮತ್ತು ದೂರದರ್ಶನದ ಅತಿಯಾದ ಬಳಕೆಯಿಂದ ಕಣ್ಣಿನ ಸಮಸ್ಯೆಗೆ ಒಳಪಡುತ್ತಿದ್ದಾರೆ. ಸಮಸ್ಯೆಗಳು ಕಾಣಿಸಿಕೊಂಡಾಗ ಸೂಕ್ತ ಸಮಯದಲ್ಲಿ ವೈದ್ಯರ ಬಳಿ ಚಿಕಿತ್ಸೆ ಪಡೆಯುತ್ತಿರುವುದರಿಂದ ನೇತ್ರ ಸಮಸ್ಯೆಗೆ ಪರಿಹಾರ ಪಡೆದುಕೊಳ್ಳಬಹುದು ಎಂದರು.

ನೇತ್ರ ಪ್ರದಾನ ಕಾರ್ಯಕ್ರಮದಂತೆ ಮುಂದೆಯೂ ಸರ್ಕಾರದ ಆರೋಗ್ಯ ಇಲಾಖೆಯ ಎಲ್ಲ ಕಾರ್ಯಕ್ರಮಗಳಿಗೆ ಕಸ್ತೂರಬಾ ಆಸ್ಪತ್ರೆ ಸಹಕಾರ ನೀಡಲಿದೆ. ಸ್ವಸ್ಥ ಸಮಾಜ ನಿರ್ಮಾಣಕ್ಕೆ ಕೈಜೋಡಿಸಲಿದೆ ಎಂದರು.

ಜಿಲ್ಲಾ ಅಂದತ್ವ ನಿಯಂತ್ರಣ ಅಧಿಕಾರಿ ಡಾ ಲತಾ ನಾಯಕ್ ಸರ್ಕಾರ ಹಾಗೂ ಕೆಎಂಸಿ ಸಹಯೋಗದಲ್ಲಿ ನಡೆಯುತ್ತಿರುವ ತರಬೇತಿ ಕಾರ್ಯಕ್ರಮದಿಂದ ಗ್ರಾಮೀಣ ಭಾಗಗಳಲ್ಲಿ ಕಣ್ಣಿನ ಸಂಬಂಧಿ ಕಾಯಿಲೆಗಳಿಂದ ಬಳಲುತ್ತಿರುವವರನ್ನು ಪತ್ತೆಹಚ್ಚಿ ಸೂಕ್ತ ಸಮಯದಲ್ಲಿ ಚಿಕಿತ್ಸೆ ನೀಡಲು ಸಹಕಾರಿಯಾಗಲಿದೆ ಎಂದರು.

ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಅವರು ಅತಿಥಿಗಳಿಗೆ ನೆನಪಿನ ಕಾಣಿಕೆಗಳನ್ನು ಹಸ್ತಾಂತರಿಸಿದರು. ಸಮುದಾಯ ಆರೋಗ್ಯ ವಿಭಾಗದ ಮುಖ್ಯಸ್ಥ ಡಾ.ಅಶ್ವಿನಿ ಕುಮಾರ್ ಗೋಪಾಡಿ ಸ್ವಾಗತಿಸಿದರು. ನೇತ್ರಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಯೋಗೀಶ್ ಕಾಮತ್ ವಂದಿಸಿದರು. ಸಂಪನ್ಮೂಲ ವ್ಯಕ್ತಿಗಳಾಗಿ ಕಸ್ತೂರಬಾ ಆಸ್ಪತ್ರೆಯ ಸಹ ಪ್ರಾಧ್ಯಾಪಕಿ ಡಾ.ನೀತಾ ಕೆ.ಐ.ಆರ್, ಸಹಾಯಕ ಪ್ರಾಧ್ಯಾಪಕಿ ಡಾ.ಸುಶನ ಶೆಟ್ಟಿ, ಡಾ.ಕೆ.ರಶ್ಮಿ ಇದ್ದರು.

ಜಿಲ್ಲೆಯ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ 250 ಸಮುದಾಯ ಆರೋಗ್ಯ ಅಧಿಕಾರಿಗಳು ಪಾಲ್ಗೊಂಡು ತರಬೇತಿಯ ಪ್ರಯೋಜನ ಪಡೆದುಕೊಂಡರು. ಡಾ.ಶ್ರುತಿ ಕಾರ್ಯಕ್ರಮ ನಿರೂಪಿಸಿದರು.



ಆರೋಗ್ಯ ಮತ್ತು ಕ್ಷೇಮ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ಸಮುದಾಯ ಆರೋಗ್ಯ ಅಧಿಕಾರಿಗಳಿಗೆ ಮಾಹೆ ಮಣಿಪಾಲದ ಇಂಟರಾಕ್ಟ್ ಸಭಾಂಗಣದಲ್ಲಿ ಶುಕ್ರವಾರ ನಡೆದ ಕಾರ್ಯಾಗಾರ ಉದ್ಘಾಟಿಸಿ ಡಿಎಚ್ಒ ಡಾ.ನಾಗಭೂಷಣ ಉಡುಪ ಮಾತನಾಡಿದರು

# ಆರೋಗ್ಯ ಮತ್ತು ಕ್ಷೇಮ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ಸಮುದಾಯ ಆರೋಗ್ಯ ಅಧಿಕಾರಿಗಳಿಗೆ ನೇತ್ರ ಮತ್ತು ಸಂಬಂಧಿತ ಕಾಯಿಲೆಗಳ ಹಾಗೂ ಅಂಧತ್ವ ನಿಯಂತ್ರಣ ಕಾರ್ಯಕ್ರಮದ ಕುರಿತು ಕಾರ್ಯಾಗಾರ..!!

by Dhrishya News – 26/05/2023 in ಕರಾವಳಿ, ಸುದ್ದಿಗಳು 0



0 SHARES 10 VIEWS

ಮಣಿಪಾಲ:ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಉಡುಪಿ ಹಾಗೂ ಜಿಲ್ಲಾ ಅಂಧತ್ವ ನಿಯಂತ್ರಣ ಘಟಕ ಉಡುಪಿ ಜಿಲ್ಲೆ ಸಂಯುಕ್ತ ಆಶ್ರಯದಲ್ಲಿ, ಆರೋಗ್ಯ ಮತ್ತು ಕ್ಷೇಮ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ಸಮುದಾಯ ಆರೋಗ್ಯ ಅಧಿಕಾರಿಗಳಿಗೆ ಒಂದು ದಿನದ ಕಾರ್ಯಾಗಾರ ಏರ್ಪಡಿಸಲಾಗಿತ್ತು. ಕಾರ್ಯಾಗಾರದಲ್ಲಿ ನೇತ್ರ ಮತ್ತು ಸಂಬಂಧಿತ ಕಾಯಿಲೆಗಳ ಶಿಕ್ಷಣ ಹಾಗೂ ಅಂಧತ್ವ ನಿಯಂತ್ರಣ ಕಾರ್ಯಕ್ರಮದ ಕುರಿತು ಶಿಕ್ಷಣ ನೀಡಲಾಯಿತು.

ಇಂದು ಮಾಹೆ ಮಣಿಪಾಲದ ಇಂಟರಾಕ್ಟ್ ಸಭಾಂಗಣದಲ್ಲಿ ನಡೆದ ಈ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ ನಾಗಭೂಷಣ ಉಡುಪ ಅವರು, ಇಡೀ ರಾಜ್ಯದಲ್ಲಿ ಮೊದಲ ಬಾರಿಗೆ ನೇತ್ರಪ್ರಧಾನ ಕಾರ್ಯಕ್ರಮದ ಅಂಗವಾಗಿ ಈ ಕಾರ್ಯಕ್ರಮವನ್ನು ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ಸಹಯೋಗದೊಂದಿಗೆ ನಡೆಸುತ್ತಿದ್ದೇವೆ. ಈ ಕಾರ್ಯಕ್ರಮವು ಇಡೀ ರಾಜ್ಯಕ್ಕೆ ಮಾದರಿಯಾಗಬೇಕು, ಇದರ ಮೂಲಕ ಹುಟ್ಟಿದ ಮಗುವಿನೊಂದಿಗೆ ಎಲ್ಲರೂ ಅಂಧತ್ವದಿಂದ ಮುಕ್ತರಾಗಬೇಕು ಎಂದು ಆಶಿಸಿದರು. ಇದಕ್ಕೆ ಸಹಕರಿಸುತ್ತಿರುವ ಕಸ್ತೂರ್ಬಾ ಆಸ್ಪತ್ರೆಗೆ ಅಭಿನಂದನೆಗಳನ್ನು ಸಲ್ಲಿಸಿದರು.




ಅಧ್ಯಕ್ಷತೆ ವಹಿಸಿದ್ದ ಕೆ ಎಂ ಸಿ ಡೀನ್ ಡಾ ಪದ್ಮರಾಜ್ ಹೆಗ್ಡೆ ಅವರು, ಈಗ ನಾವು ಕಂಪ್ಯೂಟರ್ ಮತ್ತು ತಂತ್ರಜ್ಞಾನ ಕಾಲದಲ್ಲಿ ಇದ್ದೇವೆ. ಸಣ್ಣ ಮಕ್ಕಳಿಂದ ಎಲ್ಲರೂ ಮೊಬೈಲ್ ಮತ್ತು ದೂರದರ್ಶನದಿಂದ ಕಣ್ಣಿನ ಸಮಸ್ಯೆಗೆ ಒಳಪಡುತ್ತಿದ್ದಾರೆ . ಆದಕ್ಕೆ ಸೂಕ್ತ ಸಮಯದಲ್ಲಿ ವೈದ್ಯರಿಗೆ ತೋರಿಸಿ ಚಿಕಿತ್ಸೆ ಪಡೆಯುತ್ತಿರುವುದರಿಂದ ಸಮಸ್ಯೆಗೆ ಪರಿಹಾರ ಪಡೆದುಕೊಳ್ಳಬಹುದು. ಇನ್ನು ಮುಂದೆಯೂ ಜಿಲ್ಲಾ ಆರೋಗ್ಯ ಇಲಾಖೆಯ ಯಾವುದೇ ಕಾರ್ಯಕ್ರಮಕ್ಕೆ ನಾವು ಸಹಕರಿಸಲಿದ್ದೇವೆ ಎಂದು ಹೇಳಿದರು.

ಜಿಲ್ಲಾ ಅಂದತ್ವ ನಿಯಂತ್ರಣ ಅಧಿಕಾರಿ ಡಾ ಲತಾ ನಾಯಕ್ ಈ ತರಬೇತಿ ಕಾರ್ಯಕ್ರಮದಿಂದ ನೇತ್ರಕ್ಕೆ ಸಂಬಂಧಿಸಿದ ಎಲ್ಲಾ ಕಾಯಿಲೆಗಳನ್ನು ಹಳ್ಳಿ ಹಳ್ಳಿಗಳಲ್ಲಿ ಪತ್ತೆಹಚ್ಚಿ ಸೂಕ್ತ ಸಮಯದಲ್ಲಿ ಚಿಕಿತ್ಸೆ ಸಿಗಲು ಸಹಕಾರಿಯಾಗಲಿದೆ ಎಂದರು

ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಅವರು ಅತಿಥಿಗಳಿಗೆ ನೆನಪಿನ ಕಾಣಿಕೆಗಳನ್ನು ಹಸ್ತಾಂತರಿಸಿದರು.

ಸಮುದಾಯ ಆರೋಗ್ಯ ವಿಭಾಗದ ಮುಖ್ಯಸ್ಥ ಡಾ ಅಶ್ವಿನಿ ಕುಮಾರ್ ಗೋಪಾಡಿ ಸ್ವಾಗತಿಸಿ , ನೇತ್ರಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ ಯೋಗೀಶ್ ಕಾಮತ್ ವಂದಿಸಿದರು. ಸಂಪನ್ಮೂಲ ವ್ಯಕ್ತಿಗಳಾಗಿ ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ಡಾ.ನೀತಾ ಕೆ.ಐ.ಆರ್, ಸಹ ಪ್ರಾಧ್ಯಾಪಕಿ, ಡಾ.ಸುಶನ ಶೆಟ್ಟಿ, ಸಹಾಯಕ ಪ್ರಾಧ್ಯಾಪಕಿ ಮತ್ತು ಡಾ.ರಶ್ಮಿ ಕೆ ಸಹ ಪ್ರಾಧ್ಯಾಪಕಿ ಭಾಗವಿಸಿದ್ದರು.

ಉಡುಪಿ ಜಿಲ್ಲೆಯ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸುಮಾರು 250 ಸಮುದಾಯ ಆರೋಗ್ಯ ಅಧಿಕಾರಿಗಳು ಪಾಲ್ಗೊಂಡು ಇದರ ಪ್ರಯೋಜನ ಪಡೆದುಕೊಂಡರು. ಡಾ ಶ್ರುತಿ ಕಾರ್ಯಕ್ರಮ ನಿರೂಪಿಸಿದರು.







**Daijiworld**

# Udupi: Kasturba Hospital holds workshop for govt CHC workers on eye, related diseases

Fri, May 26 2023 03:30:15 PM

*Media Release*

**Udupi, May 26:** Kasturba Medical College and Hospital Manipal in association with District Health and Family Welfare department Udupi and District Blindness Control Society Udupi district organized a day-long workshop for government community health officers who working in health and wellness centres. The workshop imparted education on eye and related diseases and the blindness control programme.

District Health and Family Welfare officer Dr Nagabhushan Udupa spoke at the inauguration of this programme which was held at the Interact Hall in MAHE Manipal on Friday, May 26. "We are conducting this programme in collaboration with Kasturba Hospital Manipal as part of the Netra Pradhan programme in the entire state for the first time," he said. He hoped that the programme should become a model for the entire state, through which everyone with a child born would be free from blindness. He congratulated the Kasturba Hospital for supporting this programme.





In his presedntial address Dr Padmaraj Hegde, dean KMC said, "Now we are in the age of computers and technology. From small children, everyone is suffering from eye problems due to mobile phones and television. By showing it to the doctor at the right time and getting treatment, the problem can be solved completely." And also he said that we will support and cooperate with all the programs of the district health department.

Dr Latha Nayak, district blindness officer said, "Through this training programme, all diseases related to the eye will be detected in the villages and help to get treatment at the right time."

Medical superintendent Dr Avinash Shetty handed over the mementoes to the guest.

Dr Ashwini Kumar Gopadi, professor and head, the department of community medicine welcomed the gathering and Dr Yogish Kamath ophthalmology professor and head department of ophthalmology, proposed the vote of thanks. Dr Neetha KIR associate professor, Dr Sushan Shetty assistant professor and Dr Rashmi K assistant department of ophthalmology Kasturba Hospital Manipal participated as resource persons.

About 250 community health officers working in the health and wellness centers of Udupi district participated and benefited. Dr Shruti was the master of ceremony for the programme.

Complete
Life Cover + M

# Kasturba Medical College Hosts Eye Care Workshop for Government Community Health Officers



**Manipal, May 26, 2023:** In collaboration with the District Health and Family Welfare Department Udupi and District Blindness Control Society Udupi District, Kasturba Medical College and Hospital Manipal successfully organized a highly informative one-day workshop.

The workshop catered specifically to Government Community Health Officers responsible for Health and Wellness Centers, focusing on enhancing their understanding of eye and related diseases, as well as the implementation of effective blindness control programs.

The inauguration of this program took place at the Interact Hall in MAHE Manipal, with District Health and Family Welfare Officer Dr. Nagabhushan Udupa addressing the attendees.

Highlighting the significance of the workshop, Dr. Udupa expressed his hopes that the Netra Pradhan program, conducted for the first time in the entire state in collaboration with Kasturba Hospital Manipal, would serve as a model for the rest of the state. Dr. Udupa commended Kasturba Hospital for the valuable support in driving this program forward.



During his impactful presidential address, Dr. Padmaraj Hegde, the Dean of KMC, shed light on the prevalent eye problems experienced by individuals, even from a young age, due to the excessive use of mobile phones and television. He emphasized the crucial role of timely medical intervention in effectively addressing these issues. Dr. Hegde assured full support and cooperation from the hospital in all programs initiated by the district health department, underscoring their commitment to promoting overall well-being.

Dr. Latha Nayak, the District Blindness Officer, highlighted the workshop's significance in early detection of eye-related diseases in rural areas, thereby ensuring timely access to necessary treatment.

Dr. Avinash Shetty, the Medical Superintendent, presented mementos to the distinguished guests. Dr. Ashwini Kumar Gopadi, Professor and Head of the Department of Community Medicine, welcomed all attendees, while Dr. Yogish Kamath, Professor and Head of the Department of Ophthalmology, delivered the vote of thanks.

The resource persons for the workshop included Dr. Neetha KIR, Associate Professor, Dr. Sushan Shetty, Assistant Professor, and Dr. Rashmi K from the Department of Ophthalmology at Kasturba Hospital Manipal, who shared their valuable expertise.

Approximately 250 Community Health Officers actively participated in the workshop, representing Health and Wellness Centers in Udupi district. Their attendance ensured they benefited from the valuable insights and knowledge shared during the program. Dr. Shruti served as the Master of Ceremony.

ಉಡುಪಿ xpress

# ಆರೋಗ್ಯ ಮತ್ತು ಕ್ಷೇಮ ಕೇಂದ್ರದ ಅಧಿಕಾರಿಗಳಿಗೆ ನೇತ್ರ ಸಂಬಂಧಿ ಕಾಯಿಲೆ-ಅಂಧತ್ವ ನಿಯಂತ್ರಣ ಕುರಿತು ಕಾರ್ಯಾಗಾರ

May 26, 2023



ಮಣಿಪಾಲ: ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಉಡುಪಿ ಹಾಗೂ ಜಿಲ್ಲಾ ಅಂಧತ್ವ ನಿಯಂತ್ರಣ ಘಟಕ ಉಡುಪಿ ಜಿಲ್ಲೆ ಇದರ ಸಂಯುಕ್ತ ಆಶ್ರಯದಲ್ಲಿ ಆರೋಗ್ಯ ಮತ್ತು ಕ್ಷೇಮ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ಸಮುದಾಯ ಆರೋಗ್ಯ ಅಧಿಕಾರಿಗಳಿಗೆ ಒಂದು ದಿನದ ಕಾರ್ಯಾಗಾರ ಏರ್ಪಡಿಸಿತ್ತು.

ಕಾರ್ಯಾಗಾರದಲ್ಲಿ ನೇತ್ರ ಮತ್ತು ಸಂಬಂಧಿತ ಕಾಯಿಲೆಗಳ ಶಿಕ್ಷಣ ಹಾಗೂ ಅಂಧತ್ವ ನಿಯಂತ್ರಣ ಕಾರ್ಯಕ್ರಮದ ಕುರಿತು ಶಿಕ್ಷಣ ನೀಡಲಾಯಿತು.

ಮಾಹೆ ಮಣಿಪಾಲದ ಇಂಟರಾಕ್ಟ್ ಸಭಾಂಗಣದಲ್ಲಿ ನಡೆದ ಈ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ ನಾಗಭೂಷಣ ಉಡುಪ, ಇಡೀ ರಾಜ್ಯದಲ್ಲಿ ಮೊದಲ ಬಾರಿಗೆ ನೇತ್ರಪ್ರಧಾನ ಕಾರ್ಯಕ್ರಮದ ಅಂಗವಾಗಿ ಈ ಕಾರ್ಯಕ್ರಮವನ್ನು ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ಸಹಯೋಗದೊಂದಿಗೆ ನಡೆಸುತ್ತಿದ್ದೇವೆ. ಈ ಕಾರ್ಯಕ್ರಮವು ಇಡೀ ರಾಜ್ಯಕ್ಕೆ ಮಾದರಿಯಾಗಬೇಕು, ಇದರ ಮೂಲಕ ಹುಟ್ಟಿದ ಮಗುವಿನಿಂದ ಹಿಡಿದು ಎಲ್ಲರೂ ಅಂಧತ್ವದಿಂದ ಮುಕ್ತರಾಗಬೇಕು ಎಂದು ಆಶಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕೆಎಂಸಿ ಡೀನ್ ಡಾ ಪದ್ಮರಾಜ್ ಹೆಗ್ಡೆ ಮಾತನಾಡಿ, ಈಗ ನಾವು ಕಂಪ್ಯೂಟರ್ ಮತ್ತು ತಂತ್ರಜ್ಞಾನ ಕಾಲದಲ್ಲಿ ಇದ್ದೇವೆ. ಸಣ್ಣ ಮಕ್ಕಳಿಂದ ಹಿಡಿದು ಎಲ್ಲರೂ ಮೊಬೈಲ್ ಮತ್ತು ದೂರದರ್ಶನದಿಂದ ಕಣ್ಣಿನ ಸಮಸ್ಯೆಗೆ ಒಳಗಾಗುತ್ತಿದ್ದಾರೆ. ಸೂಕ್ತ ಸಮಯದಲ್ಲಿ ವೈದ್ಯರಿಗೆ ತೋರಿಸಿ ಚಿಕಿತ್ಸೆ ಪಡೆಯುವುದರಿಂದ ಸಮಸ್ಯೆಗೆ ಪರಿಹಾರ ಪಡೆದುಕೊಳ್ಳಬಹುದು. ಇನ್ನು ಮುಂದೆಯೂ ಜಿಲ್ಲಾ ಆರೋಗ್ಯ ಇಲಾಖೆಯ ಯಾವುದೇ ಕಾರ್ಯಕ್ರಮಕ್ಕೆ ನಾವು ಸಹಕರಿಸಲಿದ್ದೇವೆ ಎಂದು ಹೇಳಿದರು.

ಜಿಲ್ಲಾ ಅಂಧತ್ವ ನಿಯಂತ್ರಣ ಅಧಿಕಾರಿ ಡಾ.ಲತಾ ನಾಯಕ್ ಮಾತನಾಡಿ, ಈ ತರಬೇತಿ ಕಾರ್ಯಕ್ರಮದಿಂದ ಹಳ್ಳಿಯಲ್ಲಿಯೂ ನೇತ್ರಕ್ಕೆ ಸಂಬಂಧಿಸಿದ ಎಲ್ಲಾ ಕಾಯಿಲೆಗಳನ್ನು ಪತ್ತೆಹಚ್ಚಿ ಸೂಕ್ತ ಸಮಯದಲ್ಲಿ ಚಿಕಿತ್ಸೆ ನೀಡಲು ಸಹಕಾರಿಯಾಗಲಿದೆ ಎಂದರು.



ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಅತಿಥಿಗಳಿಗೆ ನೆನಪಿನ ಕಾಣಿಕೆಗಳನ್ನು ಹಸ್ತಾಂತರಿಸಿದರು.

ಸಂಪನ್ಮೂಲ ವ್ಯಕ್ತಿಗಳಾಗಿ ಕಸ್ತೂರ್ಬಾ ಆಸ್ಪತ್ರೆಯ ಡಾ.ನೀತಾ ಕೆ.ಐ.ಆರ್, ಸಹ ಪ್ರಾಧ್ಯಾಪಕಿ, ಡಾ.ಸುಶನ ಶೆಟ್ಟಿ, ಸಹಾಯಕ ಪ್ರಾಧ್ಯಾಪಕಿ ಮತ್ತು ಡಾ.ರಶ್ಮಿ ಕೆ ಸಹ ಪ್ರಾಧ್ಯಾಪಕಿ ಭಾಗವಿಸಿದ್ದರು.

ಸಮುದಾಯ ಆರೋಗ್ಯ ವಿಭಾಗದ ಮುಖ್ಯಸ್ಥ ಡಾ ಅಶ್ವಿನಿ ಕುಮಾರ್ ಗೋಪಾಡಿ ಸ್ವಾಗತಿಸಿ, ನೇತ್ರಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ ಯೋಗೀಶ್ ಕಾಮತ್ ವಂದಿಸಿದರು. ಡಾ ಶ್ರುತಿ ಕಾರ್ಯಕ್ರಮ ನಿರೂಪಿಸಿದರು

ಉಡುಪಿ ಜಿಲ್ಲೆಯ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸುಮಾರು 250 ಸಮುದಾಯ ಆರೋಗ್ಯ ಅಧಿಕಾರಿಗಳು ಪಾಲ್ಗೊಂಡು ಇದರ ಪ್ರಯೋಜನ ಪಡೆದುಕೊಂಡರು..

**Public Next**



## ಮಣಿಪಾಲ:ಸರ್ಕಾರಿ ಆರೋಗ್ಯಾಧಿಕಾರಿಗಳಿಗೆ ನೇತ್ರ ಮತ್ತು ಅಂಧತ್ವ ನಿಯಂತ್ರಣ ಕಾರ್ಯಾಗಾರ

ಮಣಿಪಾಲ : ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಉಡುಪಿ ಹಾಗೂ ಜಿಲ್ಲಾ ಅಂಧತ್ವ ನಿಯಂತ್ರಣ ಘಟಕ ಉಡುಪಿ ಜಿಲ್ಲೆ ಸಂಯುಕ್ತ ಆಶ್ರಯದಲ್ಲಿ ಆರೋಗ್ಯ ಮತ್ತು ಕ್ಷೇಮ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ಸಮುದಾಯ ಆರೋಗ್ಯ ಅಧಿಕಾರಿಗಳಿಗೆ ಒಂದು ದಿನದ ಕಾರ್ಯಾಗಾರ ಏರ್ಪಡಿಸಲಾಗಿತ್ತು. ಕಾರ್ಯಾಗಾರದಲ್ಲಿ ನೇತ್ರ ಮತ್ತು ಸಂಬಂಧಿತ ಕಾಯಿಲೆಗಳ ಶಿಕ್ಷಣ ಹಾಗೂ ಅಂಧತ್ವ ನಿಯಂತ್ರಣ ಕಾರ್ಯಕ್ರಮದ ಕುರಿತು ಶಿಕ್ಷಣ ನೀಡಲಾಯಿತು.

ಇಂದು ಮಾಹೆ ಮಣಿಪಾಲದ ಇಂಟರಾಕ್ಟ್ ಸಭಾಂಗಣದಲ್ಲಿ ನಡೆದ ಈ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ ನಾಗಭೂಷಣ ಉಡುಪ ಅವರು, ಇಡೀ ರಾಜ್ಯದಲ್ಲಿ ಮೊದಲ ಬಾರಿಗೆ ನೇತ್ರಪ್ರದಾನ ಕಾರ್ಯಕ್ರಮದ ಅಂಗವಾಗಿ ಈ ಕಾರ್ಯಕ್ರಮವನ್ನು ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ಸಹಯೋಗದೊಂದಿಗೆ ನಡೆಸುತ್ತಿದ್ದೇವೆ. ಈ ಕಾರ್ಯಕ್ರಮವು ಇಡೀ ರಾಜ್ಯಕ್ಕೆ ಮಾದರಿಯಾಗಬೇಕು, ಇದರ ಮೂಲಕ ಹುಟ್ಟಿದ ಮಗುವಿನೊಂದಿಗೆ ಎಲ್ಲರೂ ಅಂಧತ್ವದಿಂದ ಮುಕ್ತರಾಗಬೇಕು ಎಂದು ಆಶಿಸಿದರು. ಇದಕ್ಕೆ ಸಹಕರಿಸುತ್ತಿರುವ ಕಸ್ತೂರ್ಬಾ ಆಸ್ಪತ್ರೆಗೆ ಅಭಿನಂದನೆಗಳನ್ನು ಸಲ್ಲಿಸಿದರು.

ಅಧ್ಯಕ್ಷತೆ ವಹಿಸಿದ್ದ ಕೆ ಎಂ ಸಿ ಡೀನ್ ಡಾ ಪದ್ಮರಾಜ್ ಹೆಗ್ಡೆ ಅವರು, ಈಗ ನಾವು ಕಂಪ್ಯೂಟರ್ ಮತ್ತು ತಂತ್ರಜ್ಞಾನ ಕಾಲದಲ್ಲಿದ್ದೇವೆ. ಸಣ್ಣ ಮಕ್ಕಳಿಂದ ಎಲ್ಲರೂ ಮೊಬೈಲ್ ಮತ್ತು ದೂರದರ್ಶನದಿಂದ ಕಣ್ಣಿನ ಸಮಸ್ಯೆಗೆ ಒಳಪಡುತ್ತಿದ್ದಾರೆ.ಅದಕ್ಕೆ ಸೂಕ್ತ ಸಮಯದಲ್ಲಿ ವೈದ್ಯರಿಗೆ ತೋರಿಸಿ ಚಿಕಿತ್ಸೆ ಪಡೆಯುತ್ತಿರುವುದರಿಂದ ಸಮಸ್ಯೆಗೆ ಪರಿಹಾರ ಪಡೆದುಕೊಳ್ಳಬಹುದು. ಇನ್ನು ಮುಂದೆಯೂ ಜಿಲ್ಲಾ ಆರೋಗ್ಯ ಇಲಾಖೆಯ ಯಾವುದೇ ಕಾರ್ಯಕ್ರಮಕ್ಕೆ ನಾವು ಸಹಕರಿಸಲಿದ್ದೇವೆ ಎಂದು ಹೇಳಿದರು.

ಕರಾವಳಿ

# ಆರೋಗ್ಯ ಮತ್ತು ಕ್ಷೇಮ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ಸಮುದಾಯ ಆರೋಗ್ಯ ಅಧಿಕಾರಿಗಳಿಗೆ ನೇತ್ರ ಮತ್ತು ಸಂಬಂಧಿತ ಕಾಯಿಲೆಗಳ ಹಾಗೂ ಅಂಧತ್ವ ನಿಯಂತ್ರಣ ಕಾರ್ಯಕ್ರಮದ ಕುರಿತು ಕಾರ್ಯಾಗಾರ

3 weeks ago




Spread the love

ಮಣಿಪಾಲ, 26ನೇ ಮೇ 2023:ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಉಡುಪಿ ಹಾಗೂ ಜಿಲ್ಲಾ ಅಂಧತ್ವ ನಿಯಂತ್ರಣ ಘಟಕ ಉಡುಪಿ ಜಿಲ್ಲೆ ಸಂಯುಕ್ತ ಆಶ್ರಯದಲ್ಲಿ ಆರೋಗ್ಯ ಮತ್ತು ಕ್ಷೇಮ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ಸಮುದಾಯ ಆರೋಗ್ಯ ಅಧಿಕಾರಿಗಳಿಗೆ ಒಂದು ದಿನದ ಕಾರ್ಯಾಗಾರ ಏರ್ಪಡಿಸಲಾಗಿತ್ತು. ಕಾರ್ಯಾಗಾರದಲ್ಲಿ ನೇತ್ರ ಮತ್ತು ಸಂಬಂಧಿತ ಕಾಯಿಲೆಗಳ ಶಿಕ್ಷಣ ಹಾಗೂ ಅಂಧತ್ವ ನಿಯಂತ್ರಣ ಕಾರ್ಯಕ್ರಮದ ಕುರಿತು ಶಿಕ್ಷಣ ನೀಡಲಾಯಿತು.




ಇಂದು ಮಾಹೆ ಮಣಿಪಾಲದ ಇಂಟರಾಕ್ಟ್ ಸಭಾಂಗಣದಲ್ಲಿ ನಡೆದ ಈ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ ನಾಗಭೂಷಣ ಉಡುಪ ಅವರು, ಇಡೀ ರಾಜ್ಯದಲ್ಲಿ ಮೊದಲ ಬಾರಿಗೆ ನೇತ್ರಪ್ರಧಾನ ಕಾರ್ಯಕ್ರಮದ ಅಂಗವಾಗಿ ಈ ಕಾರ್ಯಕ್ರಮವನ್ನು ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ಸಹಯೋಗದೊಂದಿಗೆ ನಡೆಸುತ್ತಿದ್ದೇವೆ. ಈ ಕಾರ್ಯಕ್ರಮವು ಇಡೀ ರಾಜ್ಯಕ್ಕೆ ಮಾದರಿಯಾಗಬೇಕು, ಇದರ ಮೂಲಕ ಹುಟ್ಟಿದ ಮಗುವಿನೊಂದಿಗೆ ಎಲ್ಲರೂ ಅಂಧತ್ವದಿಂದ ಮುಕ್ತರಾಗಬೇಕು ಎಂದು ಆಶಿಸಿದರು. ಇದಕ್ಕೆ ಸಹಕರಿಸುತ್ತಿರುವ ಕಸ್ತೂರ್ಬಾ ಆಸ್ಪತ್ರೆಗೆ ಅಭಿನಂದನೆಗಳನ್ನು ಸಲ್ಲಿಸಿದರು.

ಅಧ್ಯಕ್ಷತೆ ವಹಿಸಿದ್ದ ಕೆ ಎಂ ಸಿ ಡೀನ್ ಡಾ ಪದ್ಮರಾಜ್ ಹೆಗ್ಡೆ ಅವರು, ಈಗ ನಾವು ಕಂಪ್ಯೂಟರ್ ಮತ್ತು ತಂತ್ರಜ್ಞಾನ ಕಾಲದಲ್ಲಿ ಇದ್ದೇವೆ. ಸಣ್ಣ ಮಕ್ಕಳಿಂದ ಎಲ್ಲರೂ ಮೊಬೈಲ್ ಮತ್ತು ದೂರದರ್ಶನದಿಂದ ಕಣ್ಣಿನ ಸಮಸ್ಯೆಗೆ ಒಳಪಡುತ್ತಿದ್ದಾರೆ . ಆದಕ್ಕೆ ಸೂಕ್ತ ಸಮಯದಲ್ಲಿ ವೈದ್ಯರಿಗೆ ತೋರಿಸಿ ಚಿಕಿತ್ಸೆ ಪಡೆಯುತ್ತಿರುವುದರಿಂದ ಸಮಸ್ಯೆಗೆ ಪರಿಹಾರ ಪಡೆದುಕೊಳ್ಳಬಹುದು. ಇನ್ನು ಮುಂದೆಯೂ ಜಿಲ್ಲಾ ಆರೋಗ್ಯ ಇಲಾಖೆಯ ಯಾವುದೇ ಕಾರ್ಯಕ್ರಮಕ್ಕೆ ನಾವು ಸಹಕರಿಸಲಿದ್ದೇವೆ ಎಂದು ಹೇಳಿದರು.

ಜಿಲ್ಲಾ ಅಂಧತ್ವ ನಿಯಂತ್ರಣ ಅಧಿಕಾರಿ ಡಾ ಲತಾ ನಾಯಕ್ ಈ ತರಬೇತಿ ಕಾರ್ಯಕ್ರಮದಿಂದ ನೇತ್ರಕ್ಕೆ ಸಂಬಂಧಿಸಿದ ಎಲ್ಲಾ ಕಾಯಿಲೆಗಳನ್ನು ಹಳ್ಳಿ ಹಳ್ಳಿಗಳಲ್ಲಿ ಪತ್ತೆಹಚ್ಚಿ ಸೂಕ್ತ ಸಮಯದಲ್ಲಿ ಚಿಕಿತ್ಸೆ ಸಿಗಲು ಸಹಕಾರಿಯಾಗಲಿದೆ ಎಂದರು

ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಅವರು ಅತಿಥಿಗಳಿಗೆ ನೆನಪಿನ ಕಾಣಿಕೆಗಳನ್ನು ಹಸ್ತಾಂತರಿಸಿದರು.

ಸಮುದಾಯ ಆರೋಗ್ಯ ವಿಭಾಗದ ಮುಖ್ಯಸ್ಥ ಡಾ ಅಶ್ವಿನಿ ಕುಮಾರ್ ಗೋಪಾಡಿ ಸ್ವಾಗತಿಸಿ , ನೇತ್ರಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ ಯೋಗೀಶ್ ಕಾಮತ್ ವಂದಿಸಿದರು. ಸಂಪನ್ಮೂಲ ವ್ಯಕ್ತಿಗಳಾಗಿ ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ಡಾ.ನೀತಾ ಕೆ.ಐ.ಆರ್, ಸಹ ಪ್ರಾಧ್ಯಾಪಕಿ, ಡಾ.ಸುಚನ ಶೆಟ್ಟಿ, ಸಹಾಯಕ ಪ್ರಾಧ್ಯಾಪಕಿ ಮತ್ತು ಡಾ.ರಶ್ಮಿ ಕೆ ಸಹ ಪ್ರಾಧ್ಯಾಪಕಿ ಭಾಗವಹಿಸಿದ್ದರು.

ಉಡುಪಿ ಜಿಲ್ಲೆಯ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸುಮಾರು 250 ಸಮುದಾಯ ಆರೋಗ್ಯ ಅಧಿಕಾರಿಗಳು ಪಾಲ್ಗೊಂಡು ಇದರ ಪ್ರಯೋಜನ ಪಡೆದುಕೊಂಡರು. ಡಾ ಶ್ರುತಿ ಕಾರ್ಯಕ್ರಮ ನಿರೂಪಿಸಿದರು.

ವೈದ್ಯಕೀಯ ಅಧೀಕ್ಷಕರು

ನಮ್ಮ UDUPI BULLETIN

# ರಾಷ್ಟ್ರೀಯ ಅಂಧತ್ವ ನಿಯಂತ್ರಣ ಕಾರ್ಯಕ್ರಮ: ಜಿಲ್ಲಾ ಮಟ್ಟದ ಕಾರ್ಯಗಾರ

By Udupi Bulletin News Desk - May 26, 2023 0



**ಮಣಿಪಾಲ, ಮೇ 26:** ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಉಡುಪಿ ಹಾಗೂ ಜಿಲ್ಲಾ ಅಂಧತ್ವ ನಿಯಂತ್ರಣ ಘಟಕ ಉಡುಪಿ ಜಿಲ್ಲೆ ಸಂಯುಕ್ತ ಆಶ್ರಯದಲ್ಲಿ ಆರೋಗ್ಯ ಮತ್ತು ಕ್ಷೇಮ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಸಮುದಾಯ ಆರೋಗ್ಯ ಅಧಿಕಾರಿಗಳಿಗೆ ಒಂದು ದಿನದ ಕಾರ್ಯಾಗಾರ ಮಾಹೆ ಮಣಿಪಾಲದ ಇಂಟರಾಕ್ಟ್ ಸಭಾಂಗಣದಲ್ಲಿ ಶುಕ್ರವಾರ ನಡೆಯಿತು. ಕಾರ್ಯಾಗಾರದಲ್ಲಿ ನೇತ್ರ ಮತ್ತು ಸಂಬಂಧಿತ ಕಾಯಿಲೆಗಳ ಶಿಕ್ಷಣ ಹಾಗೂ ಅಂಧತ್ವ ನಿಯಂತ್ರಣ ಕಾರ್ಯಕ್ರಮದ ಕುರಿತು ಶಿಕ್ಷಣ ನೀಡಲಾಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ನಾಗಭೂಷಣ ಉಡುಪ, ಇಡೀ ರಾಜ್ಯದಲ್ಲಿ ಮೊದಲ ಬಾರಿಗೆ ನೇತ್ರಪ್ರಧಾನ ಕಾರ್ಯಕ್ರಮದ ಅಂಗವಾಗಿ ಈ ಕಾರ್ಯಕ್ರಮವನ್ನು ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ಸಹಯೋಗದೊಂದಿಗೆ ನಡೆಸುತ್ತಿದ್ದೇವೆ. ಈ ಕಾರ್ಯಕ್ರಮವು ಇಡೀ ರಾಜ್ಯಕ್ಕೆ ಮಾದರಿಯಾಗಬೇಕು, ಇದರ ಮೂಲಕ ಹುಟ್ಟಿದ ಮಗುವಿನೊಂದಿಗೆ ಎಲ್ಲರೂ ಅಂಧತ್ವದಿಂದ ಮುಕ್ತರಾಗಬೇಕು ಎಂದು ಆಶಿಸಿದರು. ಇದಕ್ಕೆ ಸಹಕರಿಸುತ್ತಿರುವ ಕಸ್ತೂರ್ಬಾ ಆಸ್ಪತ್ರೆಗೆ ಅಭಿನಂದನೆಗಳನ್ನು ಸಲ್ಲಿಸಿದರು.

ಅಧ್ಯಕ್ಷತೆ ವಹಿಸಿದ್ದ ಕೆಎಂಸಿ ಡೀನ್ ಡಾ. ಪದ್ಮರಾಜ್ ಹೆಗ್ಡೆ ಅವರು, ಈಗ ನಾವು ಕಂಪ್ಯೂಟರ್ ಮತ್ತು ತಂತ್ರಜ್ಞಾನ ಕಾಲದಲ್ಲಿ ಇದ್ದೇವೆ. ಸಣ್ಣ ಮಕ್ಕಳಿಂದ ಎಲ್ಲರೂ ಮೊಬೈಲ್ ಮತ್ತು ದೂರದರ್ಶನದಿಂದ ಕಣ್ಣಿನ ಸಮಸ್ಯೆಗೆ ಒಳಪಡುತ್ತಿದ್ದಾರೆ. ಅದಕ್ಕೆ ಸೂಕ್ತ ಸಮಯದಲ್ಲಿ ವೈದ್ಯರಿಗೆ ತೋರಿಸಿ ಚಿಕಿತ್ಸೆ ಪಡೆಯುತ್ತಿರುವುದರಿಂದ ಸಮಸ್ಯೆಗೆ ಪರಿಹಾರ ಪಡೆದುಕೊಳ್ಳಬಹುದು. ಇನ್ನು ಮುಂದೆಯೂ ಜಿಲ್ಲಾ ಆರೋಗ್ಯ ಇಲಾಖೆಯ ಯಾವುದೇ ಕಾರ್ಯಕ್ರಮಕ್ಕೆ ನಾವು ಸಹಕರಿಸಲಿದ್ದೇವೆ ಎಂದು ಹೇಳಿದರು. ಜಿಲ್ಲಾ ಅಂಧತ್ವ ನಿಯಂತ್ರಣ ಅಧಿಕಾರಿ ಡಾ. ಲತಾ ನಾಯಕ್, ಈ ತರಬೇತಿ ಕಾರ್ಯಕ್ರಮದಿಂದ ನೇತ್ರಕ್ಕೆ ಸಂಬಂಧಿಸಿದ ಎಲ್ಲಾ ಕಾಯಿಲೆಗಳನ್ನು ಹಳ್ಳಿ ಹಳ್ಳಿಗಳಲ್ಲಿ ಪತ್ತೆಹಚ್ಚಿ ಸೂಕ್ತ ಸಮಯದಲ್ಲಿ ಚಿಕಿತ್ಸೆ ಸಿಗಲು ಸಹಕಾರಿಯಾಗಲಿದೆ ಎಂದರು. ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ ಅವರು ಅತಿಥಿಗಳಿಗೆ ನೆನಪಿನ ಕಾಣಿಕೆಗಳನ್ನು ಹಸ್ತಾಂತರಿಸಿದರು.

ಸಮುದಾಯ ಆರೋಗ್ಯ ವಿಭಾಗದ ಮುಖ್ಯಸ್ಥ ಡಾ. ಅಶ್ವಿನಿ ಕುಮಾರ್ ಗೋಪಾಡಿ ಸ್ವಾಗತಿಸಿ, ನೇತ್ರಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ. ಯೋಗೀಶ್ ಕಾಮತ್ ವಂದಿಸಿದರು. ಸಂಪನ್ಮೂಲ ವ್ಯಕ್ತಿಗಳಾಗಿ ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ಸಹ ಪ್ರಾಧ್ಯಾಪಕಿ ಡಾ. ನೀತಾ ಕೆ.ಐ.ಆರ್, ಸಹಾಯಕ ಪ್ರಾಧ್ಯಾಪಕಿ ಡಾ. ಸುಶನ ಶೆಟ್ಟಿ, ಮತ್ತು ಸಹ ಪ್ರಾಧ್ಯಾಪಕಿ ಡಾ. ರಶ್ಮಿ ಕೆ ಭಾಗವಹಿಸಿದ್ದರು. ಉಡುಪಿ ಜಿಲ್ಲೆಯ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸುಮಾರು 250 ಸಮುದಾಯ ಆರೋಗ್ಯ ಅಧಿಕಾರಿಗಳು ಪಾಲ್ಗೊಂಡು ಇದರ ಪ್ರಯೋಜನ ಪಡೆದುಕೊಂಡರು. ಡಾ. ಶ್ರುತಿ ಕಾರ್ಯಕ್ರಮ ನಿರೂಪಿಸಿದರು.

ಸಮಾಚಾರ ಆರೋಗ್ಯ ಜಿಲ್ಲಾ ವಾರ್ತೆ

# ಅಂಧತ್ವ ನಿಯಂತ್ರಣ ಕಾರ್ಯಾಗಾರ

By lokabandhu news desk May 26, 2023

Share



**ಅಂಧತ್ವ ನಿಯಂತ್ರಣ ಕಾರ್ಯಾಗಾರ**

**ಮಣಿಪಾಲ:** ಇಲ್ಲಿನ ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ ಆಶ್ರಯದಲ್ಲಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಉಡುಪಿ ಹಾಗೂ ಜಿಲ್ಲಾ ಅಂಧತ್ವ ನಿಯಂತ್ರಣ ಘಟಕ ಉಡುಪಿ ಜಿಲ್ಲೆ ಸಹಯೋಗದೊಂದಿಗೆ ಆರೋಗ್ಯ ಮತ್ತು ಕ್ಷೇಮ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರಕಾರಿ ಸಮುದಾಯ ಆರೋಗ್ಯ ಅಧಿಕಾರಿಗಳಿಗೆ ಮಾಹೆ ಮಣಿಪಾಲದ ಇಂಟರಾಕ್ಟ್ ಸಭಾಂಗಣದಲ್ಲಿ ಶುಕ್ರವಾರ ನೇತ್ರ ಮತ್ತು ನೇತ್ರ ಸಂಬಂಧಿ ಕಾಯಿಲೆಗಳ ಶಿಕ್ಷಣ ಹಾಗೂ ಅಂಧತ್ವ ನಿಯಂತ್ರಣ ಕಾರ್ಯಕ್ರಮ ಕುರಿತು ಪ್ರಶಿಕ್ಷಣ ಕಾರ್ಯಾಗಾರ ನಡೆಸಲಾಯಿತು.




ಕಾರ್ಯಾಗಾರ ಉದ್ಘಾಟಿಸಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ನಾಗಭೂಷಣ ಉಡುಪ, ರಾಜ್ಯದಲ್ಲೇ ಮೊದಲ ಬಾರಿಗೆ ನೇತ್ರ ದಾನ ಕಾರ್ಯಕ್ರಮದಂಗವಾಗಿ ಕಸ್ತೂರ್ಬಾ ಆಸ್ಪತ್ರೆ ಮಣಿಪಾಲ ಸಹಯೋಗದೊಂದಿಗೆ ಕಾರ್ಯಾಗಾರ ನಡೆಸಲಾಗುತ್ತಿದೆ. ಈ ಕಾರ್ಯಕ್ರಮ ರಾಜ್ಯಕ್ಕೆ ಮಾದರಿಯಾಗಬೇಕು. ಆ ಮೂಲಕ ಹುಟ್ಟಿದ ಮಗುವಿನೊಂದಿಗೆ ಎಲ್ಲರೂ ಅಂಧತ್ವದಿಂದ ಮುಕ್ತರಾಗಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಕೆಎಂಸಿ ಡೀನ್ ಡಾ. ಪದ್ಮರಾಜ್ ಹೆಗ್ಡೆ, ನಾವೀಗ ಕಂಪ್ಯೂಟರ್ ಮತ್ತು ತಂತ್ರಜ್ಞಾನದ ಯುಗದಲ್ಲಿದ್ದೇವೆ. ಸಣ್ಣ ಮಕ್ಕಳಿಂದ ತೊಡಗಿ ಎಲ್ಲರೂ ಮೊಬೈಲ್ ಮತ್ತು ಟಿವಿಯಿಂದಾಗಿ ಕಣ್ಣಿನ ಸಮಸ್ಯೆಗೆ ಒಳಪಡುತ್ತಿದ್ದಾರೆ. ಸೂಕ್ತ ಸಮಯದಲ್ಲಿ ವೈದ್ಯರಿಗೆ ತೋರಿಸಿ ಚಿಕಿತ್ಸೆ ಪಡೆಯುವುದರಿಂದ ಸಮಸ್ಯೆಗೆ ಪರಿಹಾರ ಪಡೆದುಕೊಳ್ಳಬಹುದು ಎಂದರು.

ಜಿಲ್ಲಾ ಅಂಧತ್ವ ನಿಯಂತ್ರಣ ಅಧಿಕಾರಿ ಡಾ. ಲತಾ ನಾಯಕ್ ಕಾರ್ಯಾಗಾರದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ ಇದ್ದರು.

ಸಮುದಾಯ ಆರೋಗ್ಯ ವಿಭಾಗ ಮುಖ್ಯಸ್ಥ ಡಾ. ಅಶ್ವಿನಿ ಕುಮಾರ್ ಗೋಪಾಡಿ ಸ್ವಾಗತಿಸಿ, ನೇತ್ರಶಾಸ್ತ್ರ ವಿಭಾಗ ಮುಖ್ಯಸ್ಥ ಡಾ. ಯೋಗೀಶ್ ಕಾಮತ್ ವಂದಿಸಿದರು. ಸಂಪನ್ಮೂಲ ವ್ಯಕ್ತಿಗಳಾಗಿ ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ಡಾ. ನೀತಾ, ಡಾ. ಸುಶನ ಶೆಟ್ಟಿ ಮತ್ತು ಡಾ. ರಶ್ಮಿ ಕೆ. ಸಹಕರಿಸಿದರು. ಡಾ. ಶ್ರುತಿ ನಿರೂಪಿಸಿದರು.

ಉಡುಪಿ ಜಿಲ್ಲೆಯ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸುಮಾರು 250 ಸಮುದಾಯ ಆರೋಗ್ಯ ಅಧಿಕಾರಿಗಳು ಪಾಲ್ಗೊಂಡಿದ್ದರು.